ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಪ್ರಧಾನ ಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE 20/3/2020

# ಪ್ರಧಾನಿ ಮೋದಿ ದೇಶಕ್ಕೆ ಕೊಟ್ಟ ಸಂದೇಶ ಏನು.?

# ಏನಿದು ಜನತಾ ಕರ್ಫ್ಯೂ?

20/3/20

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಕರೋನಾ ವೈರಸ್ ದುರಂತದಲ್ಲಿ ಮುಳುಗಿರುವ ಭಾರತಕ್ಕೆ ಪ್ರಧಾನಿ ನರೇಂದ್ರ ಮೋದಿ ಧೈರ್ಯ ತುಂಬುವ ಕೆಲಸ ಮಾಡಿದ್ದಾರೆ. ಜನರ ಮೇಲೆ ಒತ್ತಡ ಹೇರಿ ಅವರನ್ನು ಬೆದರಿಸುವ ಪ್ರಯತ್ನ ಮಾಡದೆ, ಜನರೇ ಸ್ವಯಂ ಪ್ರೇರಣೆಯಿಂದ ಕರೋನಾ ವಿರುದ್ಧ ಹೋರಾಟಕ್ಕಿಳಿಯುವಂತೆ ಕರೆ ನೀಡಿದ್ದಾರೆ.

ಇದಕ್ಕಾಗಿ ಜನತಾ ಕರ್ಫ್ಯೂ ಎಂಬ ಹೊಸ ಪ್ರಯೋಗಕ್ಕೆ ಮುಂದಾಗಿದ್ದಾರೆ. ಅಷ್ಟಕ್ಕೂ ಜನತಾ ಕರ್ಫ್ಯೂ ಎಂಬುದು ಪೊಲೀಸರು ಜನರ ಮೇಲೆ ಹೇರುತ್ತಿರುವ ಕಾನೂನು ಅಲ್ಲ. ಜನರಿಂದ ಜನರಿಗಾಗಿ ಜನರಿಗೋಸ್ಕರ ಜನರೇ ಸ್ವಯಂ ಗೃಹಬಂಧನಕ್ಕೆ ಒಳಗಾಗುವ ಕರ್ಫ್ಯೂ. ಇದನ್ನು ದೇಶದ ಜನರಿಗೆ ಪ್ರಧಾನಿ ನರೇಂದ್ರ ಮೋದಿಯೇ ಕರೆ ಕೊಟ್ಟಿರುವ ಬಂದ್. ಈ ಮುಷ್ಕರದಲ್ಲಿ ಜನರು ಸ್ವಯಂ ತಮಗೆ ತಾವೇ ಸ್ವಯಂ ನಿರ್ಬಂಧ ಹಾಕಿಕೊಂಡು ಭಾನುವಾರ ಮಾರ್ಚ್ 22 ರಂದು ಮನೆಯಲ್ಲಿಯೇ ಉಳಿದುಕೊಳ್ಳಬೇಕು.



ಜನತಾ ಕರ್ಫ್ಯೂ ಮಾಡುವ ಮೂಲಕ ನಾವು ಮುಂದಿನ ದಿನಗಳಲ್ಲಿ ಎದುರಾಗಬಹುದಾದ ಯಾವುದೇ ಸಮಸ್ಯೆ ಎದುರಿಸಲು ಸಜ್ಜಾಗಬೇಕಿದೆ. 'ಇವತ್ತಿನಿಂದ ಎಲ್ಲ ಸಂಘಟನೆಗಳ ಸದಸ್ಯರು ಮಾರ್ಚ್ 22ರ ಭಾನುವಾರ ಜನತಾ ಕರ್ಫ್ಯೂ ಜಾರಿಗೊಳಿಸುವ ಬಗ್ಗೆ ಜನ ಜಾಗೃತಿ ಮಾಡಿ. ಒಬ್ಬೊಬ್ಬರು ಕನಿಷ್ಠ ಪಕ್ಷ 10 ಜನರಿಗೆ ಕರೆ ಮಾಡಿ ಮಾಹಿತಿ ತಿಳಿಸಿ ಎಂದು ವಿನಂತಿ ಮಾಡಿಕೊಂಡರು. ಭಾನುವಾರ ಸಂಜೆ 5 ಗಂಟೆಗೆ ಮನೆ ಮೇಲಿನ ಬಾಲ್ಕಾನಿ ಅಥವಾ ಕಿಟಕಿ, ಬಾಗಿಲುಗಳ ಬಳಿ 5 ನಿಮಿಷಗಳ ಕಾಲ ನಿಂತು ಚಪ್ಪಾಳೆ ತಟ್ಟುವ ಮೂಲಕ ಕರೋನಾ ವೈರಸ್ ತಡೆಗೆ ಬೆಂಬಲಿಸಿ ಜನತಾ ಕರ್ಫ್ಯೂವಿನಲ್ಲಿ ಭಾಗಿಯಾಗಿದ್ದಕ್ಕೆ ಧನ್ಯವಾದ ತಿಳಿಸೋಣ ಎಂದಿದ್ದಾರೆ. ಜನತಾ ಕರ್ಫ್ಯೂ ಬಗ್ಗೆ ಜನತೆಯಲ್ಲಿ ಜಾಗೃತಿ ಮೂಡಿಸಿ. ಆದರೆ ಜನತಾ ಕರ್ಫ್ಯೂ ಘೋಷಿಸಿದ್ದ ಮಾತ್ರಕ್ಕೆ 'ಯಾರೂ ಆತಂಕಕ್ಕೆ ಒಳಗಾಗಬೇಡಿ. ಅಗತ್ಯ ವಸ್ತುಗಳ ಖರೀದಿಗಾಗಿ ಅಂಗಡಿಗಳಿಗೆ ಮುಗಿಬೀಳಬೇಡಿ. ದೇಶದಲ್ಲಿ ಅಗತ್ಯ ವಸ್ತುಗಳ ಕೊರತೆ ಇಲ್ಲ. ಇದನ್ನು ಜನತೆ ಅರ್ಥ ಮಾಡಿಕೊಳ್ಳಬೇಕು ಎಂದು ನರೇಂದ್ರ ಮೋದಿ ಸಲಹೆ ನೀಡಿದ್ದಾರೆ.

## ವೈರಸ್ ತಡೆಗಟ್ಟಲು ಬೆಂಬಲ ಕೊಡಬೇಕು

ಯಾವುದೇ ಒಂದು ಪ್ರದೇಶದಲ್ಲಿ ಹೆಚ್ಚು ಮಂದಿ ಗುಂಪುಗೂಡುವುದನ್ನು ತಡೆಗಟ್ಟಲು ಕೇಂದ್ರ ಹಾಗು ರಾಜ್ಯ ಸರಕಾರಗಳು ಕರ್ಫ್ಯೂ ವಿಧಿಸುತ್ತವೆ. ಸೆಕ್ಷನ್ 144 ಕಲಂ ಪ್ರಕಾರ ಪೊಲೀಸರು ಕರ್ಫ್ಯೂ ಜಾರಿ ಮಾಡುತ್ತಾರೆ. ಯಾವ ಪ್ರದೇಶದಲ್ಲಿ ಕರ್ಫ್ಯೂ ಜಾರಿ ಮಾಡುತ್ತಾರೋ ಆ ಪ್ರದೇಶದಲ್ಲಿ ಜನರು ಮನೆಗಳಿಂದ ಹೊರಕ್ಕೆ ಬರುವಂತಿಲ್ಲ. ಗುಂಪು ಸೇರುವಂತಿಲ್ಲ. ಕರ್ಫ್ಯೂ ಉಲ್ಲಂಘನೆ ಮಾಡಿದರೆ, ಪೊಲೀಸರು ಬಂಧಿಸುವ ಅಥವಾ ಗುಂಡು ಹಾರಿಸುವ ಅವಕಾಶವೂ ಕಾನೂನಲ್ಲಿ ಇದೆ. ಆದರೆ ಇದು ಜನತಾ ಕರ್ಫ್ಯೂ. ಇದು ಪೊಲೀಸರು ಜನರ ಮೇಲೆ ಹೇರುತ್ತಿರುವ ಕಾನೂನು ಅಲ್ಲ. ಜನರಿಂದ ಜನರಿಗಾಗಿ ಜನರಿಗೋಸ್ಕರ ಜನರೇ ಸ್ವಯಂ ಗೃಹಬಂಧನಕ್ಕೆ ಒಳಗಾಗುವ ಕರ್ಫ್ಯೂ. ಇದನ್ನು ದೇಶದ ಜನರಿಗೆ ಪ್ರಧಾನಿ ನರೇಂದ್ರ ಮೋದಿಯೇ ಕರೆ ಕೊಟ್ಟಿರುವ ಬಂದ್. ಈ ಮುಷ್ಕರದಲ್ಲಿ ಜನರು ಸ್ವಯಂ ತಮಗೆ ತಾವೇ ಸ್ವಯಂ ನಿರ್ಬಂಧ ಹಾಕಿಕೊಂಡು ಭಾನುವಾರ ಮಾರ್ಚ್ 22 ರಂದು ಮನೆಯಲ್ಲಿಯೇ ಉಳಿದುಕೊಳ್ಳಬೇಕು. ಆ ಮೂಲಕ ಕರೋನಾ ವೈರಸ್ ತಡೆಗಟ್ಟಲು ಬೆಂಬಲ ಕೊಡಬೇಕು ಎಂದಿದ್ದಾರೆ. ಆದರೆ ಪೊಲೀಸರು, ಪತ್ರಕರ್ತರು, ಆಸ್ಪತ್ರೆಯ ವೈದ್ಯರು, ನರ್ಸ್‌ಗಳು ಈ ಕರ್ಫ್ಯೂನಿಂದ ಹೊರಗೆ ಉಳಿಯಬಹುದು ಎಂದಿದ್ದಾರೆ.